**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ**
ಬೇಲೂರು

**ಸಿ.ಸಿ.ನಂ.948/2023**

ಪಿರ್ಯಾದಿದಾರರು ಃ ರಾಜ್ಯ ಸರ್ಕಾರದ ಪರವಾಗಿ ,
ಹಳೇಬೀಡು ಪೊಲೀಸ್ ಠಾಣೆ.

ಃವಿರುದ್ಧಃ

ಆರೋಪಿತರು ಃ 1. ಶ್ರೀ ಸಣ್ಣೇಗೌಡ
ಬಿನ್ ದೊಡ್ಡಚಿಕ್ಕೆಗೌಡ,
65 ವರ್ಷ,

2. ಶ್ರೀಮತಿ ಸಿದ್ದಮ್ಮ,
ಕೋಂ ಸಣ್ಣೇಗೌಡ,
60 ವರ್ಷ,

ಇಬ್ಬರ ವಾಸ ಃ ಗೌರಿಕೊಪ್ಪಲು ಗ್ರಾಮ,
ಹಳೇಬೀಡು ಹೋಬಳಿ, ಬೇಲೂರು ತಾಲ್ಲೂಕು.

**ಃಃ ದೋಷಾರೋಪಣೆಃಃ**

ಶ್ರೀ. ನಾಗೇಂದ್ರ, ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಜೆ.ಎಂ.ಎಫ್.ಸಿ ನ್ಯಾಯಾಲಯ, ಬೇಲೂರು ಆದ ನಾನು ಈ ಮೂಲಕ ಆರೋಪಿತರಾದ ನಿಮ್ಮ ವಿರುದ್ಧ ಮಾಡುವ ದೋಷರೋಪಣೆ ಏನೆಂದರೆ

ಮೊದಲನೆಯದಾಗಿ ದಿನಾಂಕ ಃ17.03.2023 ರಂದು ಬೆಳಗ್ಗೆ 11.00 ಗಂಟೆ ಸಮಯದಲ್ಲಿ ಹಳೇಬೀಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಗೌರಿಕೊಪ್ಪಲು ಗ್ರಾಮದ ಸರ್ವೆ ನಂ.153/4 ರ ಜಮೀನಿಗೆ 1 ಮತ್ತು 2ನೇ ಆರೋಪಿತರಾದ ನೀವು ಜಗಳ ಮಾಡುವ ಸಮಾನ ಉದ್ದೇಶದಿಂದ ಅತಿಕ್ರಮ ಪ್ರವೇಶ ಮಾಡಿರುತ್ತೀರಿ, ಆ ಮೇರೆಗೆ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ 447 ಸಹಕಲಂ 34ರಡಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ದೋಷಾರೋಪಣೆ ಇರುತ್ತದೆ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, 1 ಮತ್ತು 2ನೇ ಆರೋಪಿತರಾದ ನೀವು ಜಗಳ ಮಾಡುವ ಸಮಾನ ಉದ್ದೇಶದಿಂದ ಬಂದು, ಸದರಿ ಜಮೀನಿನಲ್ಲಿ ಚಾಸಾ-1 ಹನುಮಂತೇಗೌಡರವರು ತಂತಿ ಕಂಬಗಳನ್ನು ನೆಡುತ್ತಿದ್ದಾಗ ಬೋಳಿ ಮಗನೇ ಈ ಜಾಗ ನಮ್ಮದು ಕುಲಗೆಟ್ಟ ನನ್ನ ಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದು

ಸಾರ್ವಜನಿಕ ಶಾಂತಿಗೆ ಭಂಗವನ್ನುಂಟು ಮಾಡಿರುತ್ತೀರಿ, ಆ ಮೇರೆಗೆ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹಕಲಂ 34ರಡಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ದೋಷಾರೋಪಣೆ ಇರುತ್ತದೆ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, 1 ಮತ್ತು 2ನೇ ಆರೋಪಿತರಾದ ಹಲ್ಲೆ ಮಾಡುವ ಸಮಾನ ಉದ್ದೇಶದಿಂದ ಬಂದು, 1ನೇ ಆರೋಪಿಯಾದ ನೀನು ಕೈಮುಷ್ಟಿಯಿಂದ ಚಾಸಾ-1 ಹನುಮಂತೇಗೌಡರವರ ಮುಖಕ್ಕೆ ತುಟಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ ಹಾಗೂ 1 ಮತ್ತು 2ನೇ ಆರೋಪಿತರಾದ ನೀವು ಚಾಸಾ-1 ರವರನ್ನು ಕಾಲುಗಳಿಂದ ತುಳಿದು ಸಾಮಾನ್ಯ ಸ್ವರೂಪದ ನೋವನ್ನುಂಟು ಮಾಡಿರುತ್ತೀರಿ, ಆ ಮೇರೆಗೆ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹಕಲಂ 34ರಡಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ದೋಷಾರೋಪಣೆ ಇರುತ್ತದೆ.

ನಾಲ್ಕನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, 1 ಮತ್ತು 2ನೇ ಆರೋಪಿತರಾದ ನೀವು ಚಾಸಾ-1 ಹನುಮಂತೇಗೌಡರವರನ್ನು ಕುರಿತು ನಿನ್ನನ್ನು ಕೊಲೆ ಮಾಡುತ್ತೇವೆ ಎಂದು ಕೊಲೆ ಬೆದರಿಕೆ ಹಾಕಿರುತ್ತೀರಿ, ಆ ಮೇರೆಗೆ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ 506 ಸಹಕಲಂ 34ರಡಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ದೋಷಾರೋಪಣೆ ಇರುತ್ತದೆ.

**ಮೇಲ್ಕಂಡ ಆರೋಪಿತರಿಗೆ ದೋಷಾರೋಪಣೆಗಳನ್ನು ಅವರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಓದಿ ಹೇಳಿ, ಅವರು ನೀಡಿದ ಉತ್ತರವನ್ನು ಯಥಾವತ್ತಾಗಿ ದಾಖಲಿಸಿಕೊಳ್ಳಲಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.**

ಸ್ಥಳ: ಬೇಲೂರು
ದಿನಾಂಕ: **24.07.2025**

(ಶ್ರೀ.ನಾಗೇಂದ್ರ)
ಸಿವಿಲ್ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ಬೇಲೂರು.

**ಸಿ.ಸಿ.ನಂ.948/2023**

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬೇಲೂರು.

ಸಿ.ಸಿ. ಸಂಖ್ಯೆಃ **948/2023**

**1ನೇ ಆರೋಪಿಯ ಹೆಸರು** ಃ ಶ್ರೀ ಸಣ್ಣೇಗೌಡ
**ತಂದೆಃಗಂಡನ ಹೆಸರು** ಃ ದೊಡ್ಡಚಿಕ್ಕೇಗೌಡ,
**ವಯಸ್ಸು** ಃ **65** ವರ್ಷ,
**ವಾಸ ಸ್ಥಳ** ಃ ಗೌರಿಕೊಪ್ಪಲು ಗ್ರಾಮ,
ಹಳೇಬೀಡು ಹೋಬಳಿ,
ಬೇಲೂರು ತಾಲ್ಲೂಕು.

ಪ್ರಶ್ನೆಃ1 ನಾನು ತಮಗೆ ಓದಿ ಹೇಳಿದ ದೋಷಾರೋಪಣೆಗಳು ಅರ್ಥವಾಯಿತೇ?
ಉತ್ತರಃ

ಪ್ರಶ್ನೆಃ2 ಸದರೀ ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ?
ಅಥವಾ ವಿಚಾರಣೆಯಾಗಬೇಕೋ?
ಉತ್ತರಃ

ಮೇಲ್ಕಂಡ ಆರೋಪಿಯ ಪರೀಕ್ಷೆಯನ್ನು ನನ್ನ ಸಮಕ್ಷಮ ಮತ್ತು ವೈಯ್ಯಕ್ತಿಕ ಹೇಳಿಕೆ ಮೇಲೆ ಮಾಡಿಕೊಂಡಿದ್ದು ಮತ್ತು ದಾಖಲಾತಿಯ ಸಂಪೂರ್ಣ ಮತ್ತು ಸತ್ಯವಾದ ಆರೋಪಿಯ ಹೇಳಿಕೆಯನ್ನು ಒಳಗೊಂಡಿರುತ್ತದೆ ಎಂದು ಈ ಮೂಲಕ ಧೃಡೀಕರಿಸುತ್ತೇನೆ.

ಸ್ಥಳಃ ಬೇಲೂರು
ದಿನಾಂಕಃ 24.07.2025

(ಶ್ರೀ. ನಾಗೇಂದ್ರ)
ಸಿವಿಲ್ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ಬೇಲೂರು

**ಸಿ.ಸಿ.ನಂ.948/2023**

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬೇಲೂರು.

<u>ಸಿ.ಸಿ. ಸಂಖ್ಯೆಃ **948/2023**</u>

**2ನೇ ಆರೋಪಿಯ ಹೆಸರು** ಃ ಶ್ರೀಮತಿ ಸಿದ್ದಮ್ಮ
**ತಂದೆ/ಗಂಡನ ಹೆಸರು** ಃ ಸಣ್ಣೇಗೌಡ,
**ವಯಸ್ಸು** ಃ 60 ವರ್ಷ,
**ವಾಸ ಸ್ಥಳ** ಃ ಗೌರಿಕೊಪ್ಪಲು ಗ್ರಾಮ,
ಹಳೇಬೀಡು ಹೋಬಳಿ,
ಬೇಲೂರು ತಾಲ್ಲೂಕು.

ಪ್ರಶ್ನೆಃ1 ನಾನು ತಮಗೆ ಓದಿ ಹೇಳಿದ ದೋಷಾರೋಪಣೆಗಳು ಅರ್ಥವಾಯಿತೇ?
ಉತ್ತರಃ

ಪ್ರಶ್ನೆಃ2 ಸದರೀ ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ?
ಅಥವಾ ವಿಚಾರಣೆಯಾಗಬೇಕೋ?
ಉತ್ತರಃ

ಮೇಲ್ಕಂಡ ಆರೋಪಿಯ ಪರೀಕ್ಷೆಯನ್ನು ನನ್ನ ಸಮಕ್ಷಮ ಮತ್ತು ವೈಯ್ಯಕ್ತಿಕ ಹೇಳಿಕೆ ಮೇಲೆ ಮಾಡಿಕೊಂಡಿದ್ದು ಮತ್ತು ದಾಖಲಾತಿಯ ಸಂಪೂರ್ಣ ಮತ್ತು ಸತ್ಯವಾದ ಆರೋಪಿಯ ಹೇಳಿಕೆಯನ್ನು ಒಳಗೊಂಡಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.

ಸ್ಥಳಃ ಬೇಲೂರು
ದಿನಾಂಕಃ 24.07.2025

(ಶ್ರೀ. ನಾಗೇಂದ್ರ)
ಸಿವಿಲ್ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ಬೇಲೂರು